# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 754 (896)

ಮಾನ್ಯ ಸದಸ್ಯರ ಹೆಸರು: ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 15.12.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಗಣನೀಯವಾಗಿ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಖಾಸಗಿ ಶಾಲೆಗಳ ಲಾಬಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಮೂಲ ಸೌಕರ್ಯ ಹಾಗೂ ಗುಣಮಟ್ಟದ ಕೊರತೆಯಿಂದಾಗಿ ಸರ್ಕಾರಿ ಶಾಲೆಗಳಿಗೆ ವಿದ್ಯಾರ್ಥಿಗಳನ್ನು ಕಳುಹಿಸಲು ಪೋಷಕರು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯ ಹಾಗೂ ಗುಣಮಟ್ಟವು ತೃಪ್ತಿಕರವಾಗಿದ್ದು, ಮತ್ತಷ್ಟು ಹೆಚ್ಚಿಸಲು ಈ ಕೆಳಕಂಡಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ.<br>**1.** ಶಾಲಾ ಲಭ್ಯತೆಯಿಲ್ಲದ ಪ್ರದೇಶಗಳಿಂದ ಸಮೀಪದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ದಾಖಲಾಗಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಸಾರಿಗೆ ಮತ್ತು ಬೆಂಗಾವಲು ಭತ್ಯೆಯನ್ನು ನೀಡಲಾಗುತ್ತಿದೆ. ಅರ್ಹ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ರೂ.600/-ರಂತೆ 10 ತಿಂಗಳಿಗೆ ರೂ 6000/-ಸಾರಿಗೆ ಭತ್ಯೆ ನೀಡಲಾಗುತ್ತಿದೆ.<br>**2.** ಸರ್ಕಾರಿ ಶಾಲೆಗಳಲ್ಲಿ 1ನೇ ತರಗತಿಯಿಂದ ಮೇಲ್ಪಟ್ಟ ಭಾಗಗಳಿಗೆ ದಾಖಲಾತಿ ಹೆಚ್ಚಿಸುವ ನಿಟ್ಟಿನಲ್ಲಿ 2018-19ನೇ ಸಾಲಿನಿಂದ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲಾಗಿದ್ದು ಪ್ರಸ್ತುತ 2619 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿ ನಡೆಸಲಾಗುತ್ತಿದ್ದು 2025-26ನೇ ಸಾಲಿಗೆ 4056 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ವಿಭಾಗ ವಿಸ್ತರಿಸಲು ಅನುಮತಿ ನೀಡಲಾಗಿದೆ. |

3. ಆಯ್ದ ಪ್ರೌಢ ಶಾಲೆಗಳಲ್ಲಿ 2014-15ನೇ ಸಾಲಿನಿಂದ ವೃತ್ತಿ ಶಿಕ್ಷಣ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಇದರ ಜೊತೆಗೆ ವೃತ್ತಿ ಮಾರ್ಗದರ್ಶನ ತರಬೇತಿಗಳನ್ನು ನೀಡಲಾಗುತ್ತಿದೆ.
4. 2019-20ನೇ ಸಾಲಿನಿಂದ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಪ್ರಸ್ತುತ 9523 ಕನ್ನಡ/ಉರ್ದು ಮಾಧ್ಯಮ ಶಾಲೆಗಳಲ್ಲಿ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ನಡೆಸಲಾಗುತ್ತಿದೆ.
5. 2018-19ನೇ ಸಾಲಿನಿಂದ ಪೂರ್ವ ಪ್ರಾಥಮಿಕದಿಂದ ಪದವಿ ಪೂರ್ವ ತರಗತಿಯವರೆಗೆ ಒಂದೇ ಸೂರಿನಡಿ ಗುಣಮಟ್ಟ ಶಿಕ್ಷಣ ನೀಡಲು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಸ್ಥಾಪಿಸಲಾಗಿರುತ್ತದೆ. ಈಗಾಗಲೇ 309 ಕೆ.ಪಿ.ಎಸ್ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ 647 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲು ಅನುಮೋದಿಸಲಾಗಿದೆ.
6. ಹೆಣ್ಣು ಮಕ್ಕಳ ಶಿಕ್ಷಣ ಪ್ರೋತ್ಸಾಹಿಸಲು 74 ಕೆ.ಜಿ.ಬಿ.ವಿ ವಸತಿ ಶಾಲೆಗಳು, 71 ಕೆ.ಜಿ.ಬಿ.ವಿ ವಸತಿ ನಿಲಯಗಳು ಹಾಗೂ ರಾಜ್ಯ ಸರ್ಕಾರದ ಅನುದಾನದಡಿ 71 ಕೆ.ಕೆ.ಜಿ.ಬಿ.ವಿ.ವಸತಿ ನಿಲಯಗಳನ್ನು ನಡೆಸಲಾಗುತ್ತಿದೆ.
7. ದುರ್ಬಲ ವರ್ಗದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆ 06 ನೇತಾಜಿ ಸುಭಾಷ್ ಚಂದ್ರ ಬೋಸ್ ಆವಾಸಿಯ ವಿದ್ಯಾಲಯಗಳನ್ನು ನಡೆಸಲಾಗುತ್ತಿದೆ.
8. ರಾಜ್ಯ ಸರ್ಕಾರದ ಅನುದಾನದಡಿ ಒಟ್ಟು 74 ಆದರ್ಶ ವಿದ್ಯಾಲಯಗಳನ್ನು ಸ್ಥಾಪಿಸಿ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲಾಗುತ್ತಿದೆ.
9. ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ವಿಶೇಷವಾಗಿ ಶಾಲೆಗಳಲ್ಲಿ ದಾಖಲಾತಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಹಾಗೂ ಸ್ಮಾರ್ಟ್ ಕ್ಲಾಸ್ ಮೂಲಕ ತರಗತಿಗಳನ್ನು ನಿರ್ವಹಿಸಲಾಗುತ್ತಿದೆ.

**10.** ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಹಾಗೂ ಶೈಕ್ಷಣಿಕ ಗುಣಮಟ್ಟ ಸುಧಾರಣೆಗಾಗಿ ಪೂರ್ವ ಪ್ರಾಥಮಿಕ ಶಿಕ್ಷಣದ ಮಕ್ಕಳಿಗೆ ECCE ಕಿಟ್ 1,2& 3ನೇ ತರಗತಿ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳು 4 ರಿಂದ 8ನೇ ತರಗತಿಗೆ ಗಣಿತ ಮತ್ತು ವಿಜ್ಞಾನ ಕಿಟ್ ಒದಗಿಸಲಾಗುತ್ತಿದೆ. 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಅಡಿಯಲ್ಲಿ ಮಕ್ಕಳ ಕಲಿಕೆಯನ್ನು ವೃದ್ಧಿಸಲು 42265 ಪ್ರಾಥಮಿಕ ಶಾಲೆಗಳಿಗೆ ಘನ ಸ್ವರೂಪದ ಕಲಿಕಾ ಸಾಮಗ್ರಿಗಳ ಕಿಟ್ ಗಳನ್ನು ವಿತರಿಸಲಾಗಿದೆ.

ಇ) ರಾಜ್ಯದಲ್ಲಿರುವ ಒಟ್ಟು ಅನುದಾನಿತ ಹಾಗೂ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು: ದಾಖಲಾಗಿರುವ ವಿದ್ಯಾರ್ಥಿಗಳ ಪ್ರಮಾಣ ಎಷ್ಟು: ಹಿಂದಿನ ವರ್ಷಕ್ಕಿಂತ ಪ್ರಸಕ್ತ ಸಾಲಿನಲ್ಲಿ ಎಷ್ಟು ಕಡಿಮೆ ಸಂಖ್ಯೆಯಲ್ಲಿ ದಾಖಲಾತಿಯಾಗಿದೆ;

| ಶಾಲೆಗಳ ವಿಧ | ವಿದ್ಯಾರ್ಥಿಗಳ ಸಂಖ್ಯೆ | | | |
|---|---|---|---|---|
| | ಶಾಲೆಗಳ ಸಂಖ್ಯೆ | 2025-26 | 2024-25 | ದಾಖಲಾತಿ ವ್ಯತ್ಯಾಸ |
| ಸರ್ಕಾರಿ ಪ್ರಾಥಮಿಕ ಶಾಲೆಗಳು | 41088 | 2803592 | 3028689 | 225097 |
| ಸರ್ಕಾರಿ ಪ್ರೌಢ ಶಾಲೆಗಳು | 5024 | 1042253 | 1045836 | 3583 |
| ಅನುದಾನಿತ ಪ್ರಾಥಮಿಕ ಶಾಲೆಗಳು | 2507 | 455595 | 510195 | 54600 |
| ಅನುದಾನಿತ ಪ್ರೌಢ ಶಾಲೆಗಳು | 3630 | 635832 | 603590 | 32242 |

ಈ) ಕಳೆದ 3 ವರ್ಷಗಳಲ್ಲಿ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ: ಅದರಲ್ಲಿ ಕನ್ನಡ ಮಾಧ್ಯಮ ಹಾಗೂ ಉರ್ದು ಮಾಧ್ಯಮ ಶಾಲೆಗಳೆಷ್ಟು?

**ಸರ್ಕಾರಿ ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ:-**

ರಾಜ್ಯದಲ್ಲಿ ಯಾವುದೇ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚಿರುವುದಿಲ್ಲ. ಮಕ್ಕಳ ಶೂನ್ಯ ದಾಖಲಾತಿಯಿಂದಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ಪುನಃ ಮಕ್ಕಳ ದಾಖಲಾತಿಯಾದಲ್ಲಿ ಶಾಲೆಗಳನ್ನು ಪುನರ್ ಆರಂಭಿಸಲಾಗುವುದು.

**ಸರ್ಕಾರಿ ಪ್ರೌಢಶಾಲೆಗೆ ಸಂಬಂಧಿಸಿದಂತೆ:-**

2023-24ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆ ಹುಲಿಕಲ್, ತುರುವೇಕೆರೆ ತಾಲ್ಲೂಕು ತುಮಕೂರು ಜಿಲ್ಲೆ ಶಾಲೆಯನ್ನು ತಾತ್ಕಾಲಿಕವಾಗಿ ಮುಚ್ಚಿದೆ.(ಕನ್ನಡ ಮಾಧ್ಯಮ)

| | | |
|---|---|---|
| (ಉ) | ಶೌಚಾಲಯ ಸೌಲಭ್ಯ ಇಲ್ಲದ ಹಾಗೂ ಗಂಡು & ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯ ಕಲ್ಪಿಸದೇ ಇರುವ ಶಾಲೆಗಳ ಸಂಖ್ಯೆ ಎಷ್ಟು: | ಶೌಚಾಲಯ ಸೌಲಭ್ಯ ಇಲ್ಲದ ಶಾಲೆಗಳು – 85 ಗಂಡು ಮಕ್ಕಳಿಗೆ ಪ್ರತ್ಯೇಕ ಶೌಚಾಲಯ ಇಲ್ಲದ ಶಾಲೆಗಳು – 1099 ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯ ಇಲ್ಲದ ಶಾಲೆಗಳು - 400 |
| ಊ | ಸರ್ಕಾರಿ ಶಾಲೆಗಳ ಶಿಕ್ಷಣ ಹಾಗೂ ಮೂಲ ಸೌಕರ್ಯದ ಹೆಚ್ಚಳಕ್ಕೆ ಹಾಗೂ ಮಕ್ಕಳ ದಾಖಲಾತಿ ಹೆಚ್ಚಳಕ್ಕೆ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು); | **ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಳಕ್ಕೆ ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.**<br>1. ಶೈಕ್ಷಣಿಕವಾಗಿ ಹಿಂದುಳಿದ 74 ತಾಲ್ಲೂಕುಗಳಲ್ಲಿ 06 ರಿಂದ 10ನೇ ತರಗತಿಯವರೆಗೆ ಇಂಗ್ಲೀಷ್ ಮಾಧ್ಯಮದಲ್ಲಿ ಕೇಂದ್ರಿಯ ವಿದ್ಯಾಲಯ ಮಾದರಿಯದಲ್ಲಿ ಆದರ್ಶ ವಿದ್ಯಾಲಯಗಳನ್ನು (ಮಾದರಿ ಶಾಲೆಗಳು) ಪ್ರಾರಂಭಿಸಲಾಗಿದೆ.<br>2. ಶತಮಾನ ಪೂರೈಸಿದ ಶಾಲೆಗಳನ್ನು ಪಾರಂಪರಿಕ ಶಾಲೆಗಳೆಂದು ಗುರ್ತಿಸಿ ಶಾಲಾ ನವೀಕರಣಕ್ಕಾಗಿ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br>3. ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1 ನೇ ತರಗತಿಯಿಂದ ಪ್ರಸ್ತುತ ಇರುವ ಕನ್ನಡ /ಇತರೆ ಮಾಧ್ಯಮದ ಜೊತೆಗೆ ಒಟ್ಟು 9522 ಆಂಗ್ಲ (ದ್ವಿಭಾಷಾ) (Bilingual) ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿರುತ್ತದೆ. 6675 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಲಾಗಿದೆ.<br>4. ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 2024-25ನೇ ಸಾಲಿನಲ್ಲಿ ಒಟ್ಟು 150 ಮತ್ತು 2025-26ನೇ ಸಾಲಿನಲ್ಲಿ ಒಟ್ಟು 7 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.<br>5. ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ, ಬೆಂಗಳೂರುರವರ ಸುತ್ತೋಲೆ: 2202(4): 2.1/2025-26/1786476: 27/05/2025 3 ಆಂದೋಲನ, ಸೇತುಬಂಧ ಹಾಗೂ ಮಿಂಚಿನ ಸಂಚಾರ ಕಾರ್ಯಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಸುತ್ತೋಲೆ ಹೊರಡಿಸಲಾಗಿದೆ.<br>6. ಶೈಕ್ಷಣಿಕ ಸ್ಥಿತಿಗತಿಗಳಿಗೆ ಅನುಗುಣವಾಗಿ ಕಲಿಕಾ ಶೈಲಿಯ ಬದಲಾವಣೆ ಆಧುನಿಕ ಕಲಿಕಾ ವಿಧಾನಗಳ ಅಳವಡಿಕೆ, ಮೂಲಭೂತ ಸೌಕರ್ಯಗಳು ಹಾಗೂ ಶಿಕ್ಷಕರ ಕೊರತೆ ಇಲ್ಲದಂತೆ ನೋಡಿಕೊಳ್ಳುವುದರೊಂದಿಗೆ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಕ್ರಮವಹಿಸಲಾಗುತ್ತಿದೆ. |

7. ಸರ್ಕಾರದ ಸುತ್ತೋಲೆ ಸಂಖ್ಯೆ:ಇಪಿ 98 ಎಂಪಿಇ 2025, ದಿನಾಂಕ:13.11.2025 ರಂತೆ 14 ನವೆಂಬರ್ 2025 ರಿಂದ 30 ಜೂನ್ 2026 ರವರೆಗೆ ದಾಖಲಾತಿ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ. ನವೆಂಬರ್ 14 ರಂದು ಪೋಷಕ ಹಾಗೂ ಶಿಕ್ಷಕರ ಮಹಾ ಸಭೆಯನ್ನು ಆಯೋಜಿಸಲಾಗಿದ್ದು ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಕಲಿಕೆ ಮತ್ತು ಸಾಧನಗಳ ಕುರಿತು ಪೋಷಕರಿಗೆ ಮನವರಿಕೆ ಮಾಡಿ ಕೊಡಲಾಗಿರುತ್ತದೆ.
8. ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಶೂ, ಮಧ್ಯಾಹ್ನದ ಉಪಹಾರ, ಕ್ಷೀರಭಾಗ್ಯ 6 ದಿನ ಮೊಟ್ಟೆ/ಬಾಳೆಹಣ್ಣು ನೀಡಲಾಗುತ್ತಿದೆ.
9. ಗುಣಾತ್ಮಕ ಶಿಕ್ಷಣಕ್ಕಾಗಿ ನಿಯಮಿತವಾಗಿ ಶಿಕ್ಷಕರಿಗೆ ತರಬೇತಿ ಆಯೋಜಿಸಲಾಗುತ್ತದೆ.
10. ಸರ್ಕಾರಿ ಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪ್ರೋತ್ಸಾಹಿಸಲಾಗುತ್ತಿದೆ.
11. 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 91 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 7ನೇ ತರಗತಿಯಿನ್ನು 8ನೇ ತರಗತಿಯನ್ನಾಗಿ ಉನ್ನತೀಕರಿಸಲಾಗಿದೆ.
12. ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಪ್ರತಿ ಬ್ಲಾಕ್ ನಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿ ಪೋಷಕರ & ಮಕ್ಕಳ ಮನವೊಲಿಸಿ ಶಾಲೆಗೆ ಕರೆತರಲು ಕ್ರಮವಹಿಸಲಾಗುತ್ತಿದೆ.
13. 2025-26ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಮತ್ತು ದಾಖಲಾತಿ ಅಂದೋಲನ ಸೇತುಬಂಧ ಹಾಗೂ ಮಿಂಚಿನ ಸಂಚಾರ ಕಾರ್ಯಕ್ರಮಗಳನ್ನು ಕೈಗೊಂಡಿದೆ. ವರ್ಷಕ್ಕೆರಡು ಸಮುದಾಯದತ್ತ ಶಾಲಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

- ಸರ್ಕಾರಿ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರಿ ಶಾಲೆಗಳಿಗೆ ಅನ್ನಭಾಗ್ಯ ಕ್ಷೀರಭಾಗ್ಯ ಪಠ್ಯಪುಸ್ತಕ ಸಮವಸ್ತ್ರ, ಮುಂತಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.
- ಪಿ.ಟಿ.ಆರ್.ಆಧಾರದಲ್ಲಿ ಅಗತ್ಯ ಸಂಖ್ಯೆಯ ಶಿಕ್ಷಕರನ್ನು ಒದಗಿಸಲಾಗುತ್ತಿದೆ
- ಕನ್ನಡ ಮಾಧ್ಯಮ ಪ್ರೌಢ ಶಾಲೆಗಳಲ್ಲಿ ಬೇಡಿಕೆ ಇದ್ದಲ್ಲಿ ಅರ್ಹತೆ ಅನುಸಾರ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ.

| | | | |
|---|---|---|---|
| | | | • 2025-26ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಪಿ 61 ಎಸ್ಓ ಹೆಚ್ 2025 ಬೆಂಗಳೂರು ದಿನಾಂಕ. 07.08.2025.ರ ಸರ್ಕಾರಿ ಆದೇಶದಲ್ಲಿ 147 ಸ.ಹಿ.ಪ್ರಾ.ಶಾಲೆಗಳನ್ನು ಹಾಗೂ ಇಡಿ 61 ಎಸ್ ಓ ಎಚ್ 2025 ಬೆಂಗಳೂರು ದಿನಾಂಕ. 16.09.2025.ರ ಸರ್ಕಾರದ ಆದೇಶದಲ್ಲಿ 35 ಸ.ಹಿ.ಪ್ರಾ.ಶಾಲೆಗಳು ಒಟ್ಟು 182 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಸರ್ಕಾರಿ ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಿ ಆದೇಶಿಸಿದೆ.<br><br>• 2025-26ನೇ ಸಾಲಿನಲ್ಲಿ ಎ.ಡಿ.ಬಿ. ನೆರವಿನೊಂದಿಗೆ 500 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲು ಯೋಜಿಸಿದ್ದು 474 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br><br>• ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂಪಿಇ2025 ಬೆಂಗಳೂರು ದಿನಾಂಕ: 28.11.2025 ರಲ್ಲಿ ಕಲ್ಯಾಣ ಕರ್ನಾಟಕದ ಅಕ್ಷರ ಅವಿಷ್ಕಾರ ಯೋಜನೆಯಡಿಯಲ್ಲಿ 200 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br><br>2026-27ನೇ ಸಾಲಿನಲ್ಲಿ ದಾಖಲಾತಿ ಹೆಚ್ಚಿಸಲು ದಾಖಲಾತಿ ಆಂದೋಲನ ನಡೆಸಲು ಸುತ್ತೋಲೆ (ಸಂಖ್ಯೆ: ಇಪಿ 98 ಎಂಪಿಇ 2025, ದಿನಾಂಕ: 13.11.2025) ಹೊರಡಿಸಲಾಗಿದೆ.<br><br>ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಮೂಲಭೂತ ಸೌಲಭ್ಯ ಒದಗಿಸಲು ಕಳೆದ ಮೂರು ವರ್ಷಗಳಲ್ಲಿ ಕೊಠಡಿಗಳ ನಿರ್ಮಾಣ, ಕೊಠಡಿಗಳ ದುರಸ್ತಿ ಮತ್ತು ಶೌಚಾಲಯ ನಿರ್ಮಾಣಕ್ಕಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆಯಾಗಿರುತ್ತದೆ. |

## ಸರ್ಕಾರಿ ಶಾಲೆಗಳ ಕೊಠಡಿಗಳ ನಿರ್ಮಾಣ :

ರೂ.ಲಕ್ಷಗಳಲ್ಲಿ

| ಯೋಜನೆ ಮಂಜೂರಾದ ವರ್ಷ | ಯೋಜನೆ | ಮಂಜೂರಾದ ಕಾಮಗಾರಿಗಳ ಸಂಖ್ಯೆ | ಮಂಜೂರಾದ ಅನುದಾನ | ಅನುದಾನ ಬಿಡುಗಡೆ ಮಾಡಲಾದ ವರ್ಷ | ಬಿಡುಗಡೆ ಮಾಡಲಾದ ಅನುದಾನ |
|---|---|---|---|---|---|
| 2022-23 | ವಿವೇಕ | 5435 | 77682.58 | 2022-23 | 46901.84 |
| | | | | 2023-24 | 16960.61 |
| | | | | 2024-25 | 11462.11 |
| | | 159 | 2342.60 | 2024-25 | 2342.60 |
| 2024-25 | ಮುಂದುವರೆದ ಯೋಜನೆ | 7894 | 11529.65 | 2024-25 | 10362.47 |
| ಒಟ್ಟು | | 6378 | 91554.89 | | 88029.63 |

## ಸರ್ಕಾರಿ ಶಾಲೆಗಳ ಕೊಠಡಿಗಲ ದುರಸ್ತಿ:

ರೂ.ಲಕ್ಷಗಳಲ್ಲಿ

| ವರ್ಷ | ಮಂಜೂರಾದ ಶಾಲೆಗಳು | ಮಂಜೂರಾದ ಅನುದಾನ | ಬಿಡುಗಡೆಯಾದ ಅನುದಾನ |
|---|---|---|---|
| 2022-23 | 1878 | 4850.00 | 4850.00 |
| 2023-24 | 2162 | 7000.00 | 7000.00 |
| 2024-25 | 5744 | 15129.66 | 15129.66 |
| 2024-25 (SCP/TSP) | 94 | 170.00 | 170.00 |
| **ಒಟ್ಟು** | **9878** | **27149.66** | **27149.66** |

## ಶೌಚಾಲಯ ನಿರ್ಮಾಣ

ರೂ. ಲಕ್ಷಗಳಲ್ಲಿ

| ವರ್ಷ | ಮಂಜೂರಾದ ಶಾಲೆಗಳು | ಬಿಡುಗಡೆಯಾದ ಅನುದಾನ |
|---|---|---|
| 2022-23 | 7650 | 3500.00 |
| 2023-24 | | 8000.00 |
| 2024-25 | | 12106.05 |
| ಒಟ್ಟು | 7650 | 23606.05 |

**ಕುಡಿಯುವ ನೀರು ಹಾಗು ಶೌಚಾಲಯ ನಿರ್ವಹಣೆ**
ರೂ ಲಕ್ಷಗಳಲ್ಲಿ

| ವರ್ಷ | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|
| 2022-23 | 3500.00 |
| 2023-24 | 7122.00 |
| 2024-25 | 5798.32 |
| ಒಟ್ಟು | 16420.32 |

2025-26ನೇ ಸಾಲಿಗೆ ರಾಜ್ಯವಲಯ ಮುಂದುವರೆದ ಯೋಜನೆಯಡಿ ಸರ್ಕಾರಿ ಶಾಲಾ ಕೊಠಡಿಗಳ ನಿರ್ಮಾಣಕ್ಕಾಗಿ ರೂ.36000.00ಲಕ್ಷಗಳು, ಸರ್ಕಾರಿ ಶಾಲೆಗಳಲ್ಲಿನ ಕೊಠಡಿಗಳ ದುರಸ್ತಿ ಕಾಮಗಾರಿಗೆ ರೂ.10000.00 ಲಕ್ಷಗಳು ಹಾಗೂ ಶೌಚಾಲಯ ನಿರ್ಮಾಣಕ್ಕಾಗಿ ರೂ.9000.00 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಕ್ರಿಯಾಯೋಜನೆ ಅನುಮೋದನೆಗೊಳ್ಳುವ ಪ್ರಕ್ರಿಯೆಯಲ್ಲಿದೆ.

**ಇಪಿ 148 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು